ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.

ಸಿಸಿ ನಂಬರ್ **1317 /2023**

| | | |
|---|---|---|
| ಸಾಕ್ಷಿಯ ಹೆಸರು | : ಜಗದೀಶ್ | ಸಿ.ಡಬ್ಲ್ಯು 2 |
| ತಂದೆಯ ಹೆಸರು | : ಓಂಕಾರಪ್ಪ | ಪಿ.ಡಬ್ಲ್ಯು 3 |
| ವಯಸ್ಸು | : 45 ವರ್ಷ | |
| ಉದ್ಯೋಗ | : ಕೂಲಿ | |
| ವಾಸ ಸ್ಥಳ | : ತರೀಕೆರೆ | |

ದಿನಾಂಕಃ**13-11-2025** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ಆರೋಪಿಯನ್ನು ನೋಡಿಲ್ಲ. ಅಬಕಾರಿ ಪೋಲೀಡರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ ಮತ್ತು ಯಾವುದೇ ವಸ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ಈಗ ಒಂದು ವರ್ಷ ಹಿಂದೆ ನನ್ನ ಪರಿಚಯದ ಹುಡುಗ ಹೇಳಿದ ಕಾರಣ ಒಂದು ದಾಖಲೆಗೆ ಸಹಿ ಮಾಡಿದ್ದೇನೆ. ಇಷ್ಟನ್ನು ಹೊರತು ಪಡಿಸಿ ನನಗೆ ಬೇರೆ ಏನೂ ಗೊತ್ತಿಲ್ಲ. ಸಾಕ್ಷಿಸಹಿ ಇರುವ ದಾಖಲೆ ಜಪ್ತಿ ಪಂಚನಾಮೆಯಾಗಿದ್ದು ಅದನ್ನು ನಿಪಿ-5 ಎಂದು, ಸಹಿಯನ್ನು 5(ಎ ) ಎಂದು ಗುರುತಿಸಲಾಯಿತು.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಅಂತ ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ.ಸ.ಅ. ರವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ಮಾನ್ಯ ಸ.ಸ.ಅ.ರವರಿಂದಃ-

ದಿನಾಂಕ 17.04.2023 ರಂದು ಬೆಳಗ್ಗೆ 10.45 ರ ಸುಮಾರಿಗೆ ಆರೋಪಿಯು ತನ್ನ ಟಿ.ವಿ.ಎಸ್. ವಾಹನದ ಮೇಲೆ ಅಕ್ರಮವಾಗಿ ಸಾಗಾಟ ಮಾಡುತ್ತಿದ್ದ 90 ಎಮ್.ಎಲ್ ನ 60 ಜೀನಿಯಸ್ ಪ್ರೆಸ್ಟೀಜ್ ವಿಸ್ಕಿಯ ಟೆಟ್ರಾ ಪ್ಯಾಕೇಟುಗಳನ್ನು ವಾಹನ ಸಂಖ್ಯೆ.ಕೆ.ಎ.18 ಪಿ.4079 ರ ಸಮೇತ ಅಮಾನತ್ತು ಪಡಿಸಿಕೊಂಡು ಸ್ಥಳದಲ್ಲಿಯೇ ಪಂಚನಾಮೆಯನ್ನು ಬರೆದು ನನ್ನ ಸಹಿ ಪಡೆದುಕೊಂಡಿದ್ದಾರೆ ಎಂದರೆ ಸರಿಯಲ್ಲ. ನನ್ನ ಜೊತೆ ರಾಕೇಶ್ ಎನ್ನುವವರು ಕೂಡ ಹಾಜರು ಇದ್ದ ರು ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ

ವಕೀಲರು ಇರುವುದಿಲ್ಲ ಎಂದು ಹೇಳುತ್ತಾರೆ.

ಮರುವಿಚಾರಣೆ : ಇಲ್ಲಃ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಎ ಒ

ಸಹಿ/-

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ